# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 548 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎಂ.ನಾಗರಾಜು, (ವಿಧಾನ ಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 08.12.2023 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| **ಕ್ರ. ಸಂ.** | **ಪ್ರಶ್ನೆ** | **ಉತ್ತರ** |
|---|---|---|
| ಅ) | ಸಾಮಾಜಿಕವಾಗಿ, ಶೈಕ್ಷಣಿಕವಾಗಿ, ಆರ್ಥಿಕವಾಗಿ ಮತ್ತು ರಾಜಕೀಯವಾಗಿ ಅತಿ ಹಿಂದುಳಿದ ಸಮಾಜವಾಗಿರುವ ಗೊಲ್ಲ ಸಮುದಾಯದ ಸ್ಥಿತಿಗತಿಗಳ ಬಗ್ಗೆ ಸರ್ಕಾರದಲ್ಲಿ ಮಾಹಿತಿ ಇದೆಯೇ: | ಗೊಲ್ಲ ಸಮುದಾಯವು ಹಿಂದುಳಿದ ವರ್ಗಗಳಲ್ಲಿ ಅತೀ ಹಿಂದುಳಿದ ಸಮುದಾಯವಾಗಿದ್ದು, ಈ ಸಮುದಾಯವನ್ನು ಸರ್ಕಾರದ ಆದೇಶ ಸಂಖ್ಯೆ. ಪಿಹೆಚ್‌ಎಸ್ 262 ಎಸ್‌ಇಡಬ್ಲ್ಯೂ 65, ದಿನಾಂಕ: 01/02/1966 ರನ್ವಯ ಹಿಂದುಳಿದ ವರ್ಗಗಳ ಅಲೆಮಾರಿ/ ಅರೆಅಲೆಮಾರಿಗಳ ಸಮುದಾಯಗಳ ಪಟ್ಟಿಯಲ್ಲಿ ಸೇರ್ಪಡೆ ಮಾಡಲಾಗಿರುತ್ತದೆ. ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000 ದಿನಾಂಕ: 30.03.2002ರಲ್ಲಿ ಗೊಲ್ಲ ಸಮುದಾಯವನ್ನು ಹಿಂದುಳಿದ ವರ್ಗಗಳ ಪಟ್ಟಿಯ ಪ್ರವರ್ಗ-1ರ ಡಿಯಲ್ಲಿ ಸೇರಿಸಿ ಶೈಕ್ಷಣಿಕ ಮತ್ತು ಉದ್ಯೋಗಕ್ಕಾಗಿ ಈ ಪ್ರವರ್ಗಕ್ಕೆ ಶೇ.4ರಷ್ಟು ಮೀಸಲಾತಿಯನ್ನು ಕಲ್ಪಿಸಲಾಗಿರುತ್ತದೆ. |
| ಆ) | ಇದ್ದಲ್ಲಿ, ಗೊಲ್ಲ ಮತ್ತು ಉಪಜಾತಿಗಳನ್ನು ಒಳಗೊಂಡಂತೆ ಈ ಸಮುದಾಯದ ಅಭಿವೃದ್ಧಿಗೆ ಪ್ರತ್ಯೇಕ ನಿಗಮ ರಚಿಸಬಾರದೇಕೆ; ಪ್ರತ್ಯೇಕ ನಿಗಮ ರಚಿಸುವ ಯೋಜನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಗೊಲ್ಲ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಲಾಗುವುದು? | ಗೊಲ್ಲ ಸಮುದಾಯವು ಸೇರಿದಂತೆ ಪ್ರವರ್ಗ-1 ರಡಿಯಲ್ಲಿ ಬರುವ 46 ಸಮುದಾಯಗಳನ್ನು ಹಿಂದುಳಿದ ವರ್ಗಗಳ ಅಲೆಮಾರಿ ಮತ್ತು ಅರೆಅಲೆಮಾರಿ ಸಮುದಾಯಕ್ಕೆ ಸೇರಿಸಲಾಗಿರುತ್ತದೆ. ಈ ಸಮುದಾಯಗಳಿಗೆ ಸರ್ಕಾರದ ಆದೇಶ ಸಂಖ್ಯೆ:ಹಿಂವಕ 262 ಬಿಸಿಎ 2018 ದಿನಾಂಕ:28.01.2019 ರನ್ವಯ ಕರ್ನಾಟಕ ಅಲೆಮಾರಿ ಮತ್ತು ಅರೆಅಲೆಮಾರಿ ಅಭಿವದ್ಧಿ ನಿಗಮವನ್ನು ದಿನಾಂಕ:13.02.2020 ರಲ್ಲಿ ಕಂಪನಿ ಕಾಯ್ದೆ-2013ರಡಿ ನೋಂದಾಯಿಸಿ ಸ್ಥಾಪಿಸಿ ಈ ಸಮುದಾಯದ ಸರ್ವತೋಮುಖ ಅಭಿವೃದ್ಧಿಗಾಗಿ ವಿವಿಧ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸಲಾಗುತ್ತಿದೆ.<br>ಗೊಲ್ಲ ಸಮುದಾಯಕ್ಕಾಗಿ ಪ್ರತ್ಯೇಕ ನಿಗಮವನ್ನು ಸ್ಥಾಪಿಸುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |

**ಸಂಖ್ಯೆ**: ಹಿಂವಕ 295 ಬಿಸಿಎ 2023

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು.